## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ** ವಿಜಯಪುರ ವಿಮಾನ ನಿಲ್ದಾಣ ಅಭಿವೃದ್ಧಿ ಯೋಜನೆಯ ಮೊದಲನೆ ಹಂತದಲ್ಲಿ ಕೈಗೊಳ್ಳಲಾದ ಕಾಮಗಾರಿಗಳಿಗೆ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ**

1. ಸರ್ಕಾರದ ಆದೇಶ ಸಂಖ್ಯೆ:ಮೂಅಇ 01 ರಾಅವಿ 2019, ದಿನಾಂಕ:23.07.2020.
2. ಸರ್ಕಾರದ ಆದೇಶ ಸಂಖ್ಯೆ: ಮೂಅಇ 01 ರಾಅವಿ 2019, ದಿನಾಂಕ:14.12.2020.
3. ಸರ್ಕಾರದ ಆದೇಶ ಸಂಖ್ಯೆ: ಮೂಅಇ 01 ರಾಅವಿ 2019, ದಿನಾಂಕ: 26.05.2021.
4. ಸರ್ಕಾರದ ಆದೇಶ ಸಂಖ್ಯೆ: ಮೂಅಇ 01 ರಾಅವಿ 2019, ದಿನಾಂಕ: 26.11.2021.
5. ಸರ್ಕಾರದ ಆದೇಶ ಸಂಖ್ಯೆ: ಐಡಿಡಿ 22 ಯುಐಪಿ 2020, ದಿನಾಂಕ: 15.04.2021
6. 5) ಆರ್ಥಿಕ ಇಲಾಖೆ ಆದೇಶ ಸಂಖ್ಯೆ; ಎಫ್‌ಡಿ 605 ಬಿಆರ್‌ಎಸ್ 2021 , ದಿನಾಂಕ: 08/03/2022

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರ ಸರ್ಕಾರದ ಆದೇಶದಲ್ಲಿ ವಿಜಯಪುರ ವಿಮಾನ ನಿಲ್ದಾಣ ಅಭಿವೃದ್ಧಿಗೆ ಸಂಬಂಧಿಸಿದ ಕಾಮಗಾರಿಗಳನ್ನು ರೂ.220.00 ಕೋಟಿ ಅಂದಾಜು ಮೊತ್ತದಲ್ಲಿ 2 ಹಂತಗಳಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

2) ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಸರ್ಕಾರದ ಆದೇಶದಲ್ಲಿ ವಿಜಯಪುರ ವಿಮಾನ ನಿಲ್ದಾಣ ಅಭಿವೃದ್ಧಿ ಕಾಮಗಾರಿಗಳನ್ನು ಒಟ್ಟು ಅಂದಾಜು ಮೊತ್ತ ರೂ. 220 ಕೋಟಿಗಳು ಹಾಗೂ ವಿಮಾನ ನಿಲ್ದಾಣದ ಹಂತ-1ರ ಕಾಮಗಾರಿಗಳನ್ನು ಗರಿಷ್ಠ ರೂ.95.00 ಕೋಟಿಗಳ ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

3) ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ವಿಜಯಪುರ ವಿಮಾನ ನಿಲ್ದಾಣ ಅಭಿವೃದ್ಧಿಯ ಮೊದಲನೇ ಹಂತದಲ್ಲಿ ಕೈಗೊಳ್ಳಲಾದ ಕಾಮಗಾರಿಗಳಿಗೆ ರೂ. 25.00 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಿದೆ.

4) ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆದೇಶದಲ್ಲಿ ವಿಜಯಪುರ ವಿಮಾನ ನಿಲ್ದಾಣ ಅಭಿವೃದ್ಧಿಯ ಮೊದಲನೇ ಹಂತದಲ್ಲಿ ಕೈಗೊಳ್ಳಲಾದ ಕಾಮಗಾರಿಗಳಿಗೆ ರೂ. 39.10 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಿದೆ.

5) ಮೇಲೆ ಓದಲಾದ ಕ್ರಮ ಸಂಖ್ಯೆ (05)ರ ಆದೇಶದಲ್ಲಿ 2021-22ನೇ ಆರ್ಥಿಕ ಸಾಲಿಗೆ ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಮುಂದುವರೆದ

ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅನುಮೋದನೆಯನ್ನು ನೀಡಿ ಆದೇಶಿಸಲಾಗಿದೆ. ಇದರಲ್ಲಿ ಲೆಕ್ಕ ಶೀರ್ಷಿಕೆ 5465-01-190-1-05-132- ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ – ಬಂಡವಾಳ ವೆಚ್ಚಗಳು ಅಡಿ 25000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.

6) ಮೇಲೆ ಓದಲಾದ ಕ್ರಮ ಸಂಖ್ಯೆ (06)ರ ಆರ್ಥಿಕ ಇಲಾಖೆಯ ಆದೇಶದಲ್ಲಿ ಲೆಕ್ಕ ಶೀರ್ಷಿಕೆ 5465-01-190-1-05-132- ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ – ಬಂಡವಾಳ ವೆಚ್ಚಗಳಿಗೆ ಪೂರಕ ಅಂದಾಜಿನಲ್ಲಿ ರೂ.15000.00 ಲಕ್ಷಗಳ ಹೆಚ್ಚುವರಿ ಅನುದಾನವನ್ನು ಒದಗಿಸಲಾಗಿರುತ್ತದೆ. ಸದರಿ ಅನುದಾನದಲ್ಲಿ ವಿಜಯಪುರ ವಿಮಾನ ನಿಲ್ದಾಣದ ಪ್ಯಾಕೇಜ್ 1 ಕಾಮಗಾರಿಗಳು ತ್ವರಿತಗತಿಯಲ್ಲಿ ಸಾಗುತ್ತಿದ್ದು, ವಿಜಯಪುರ ವಿಮಾನ ನಿಲ್ದಾಣದ ಅಭಿವೃದ್ಧಿಗೆ ಸಂಬಂಧಿಸಿದಂತೆ ಅನುದಾನವನ್ನು ಬಿಡುಗಡಗೊಳಿಸಲು ತೀರ್ಮಾನಿಸಿ ಈ ಕಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಮೂಅಇ 01 ರಾಅವಿ 2019**
**ಬೆಂಗಳೂರು, ದಿನಾಂಕ: 21ನೇ ಮಾರ್ಚ್ 2022.**

ಪ್ರಸ್ತಾವನೆಯನ್ನು ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ವಿಜಯಪುರ ವಿಮಾನ ನಿಲ್ದಾಣ ಅಭಿವೃದ್ಧಿಯ ಮೊದಲನೇ ಹಂತದಲ್ಲಿ ಕೈಗೊಳ್ಳಲಾದ ಕಾಮಗಾರಿಗಳಿಗೆ ರೂ. 40.00 ಕೋಟಿಗಳ ಅನುದಾನವನ್ನು (ನಲವತ್ತು ಕೋಟಿ ರೂಪಾಯಿಗಳು ಮಾತ್ರ) ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್ .ಐ.ಐ.ಡಿ.ಸಿ ಇವರ ಮುಖಾಂತರ ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ವಿಜಯಪುರ ಇವರಿಗೆ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಬಿಡುಗಡೆ ಮಾಡಲು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

**2. ಷರತ್ತುಗಳು**

- ಈಗ ಬಿಡುಗಡೆ ಆಡಿರುವ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಕೆ ಮಾಡತಕ್ಕದ್ದು, ಹಾಗೂ ಇದೇ ಉದ್ದೇಶಕ್ಕೆ ಈಗಾಗಲೇ ವೆಚ್ಚ ಮಾಡಿದ್ದಲ್ಲಿ ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಬಳಕೆ ಮಾಡುವಂತಿಲ್ಲ.
- ಬಿಡುಗಡೆ ಮಾಡಿರುವ ಅನುದಾನವನ್ನು ವಿಜಯಪುರ ವಿಮಾನ ನಿಲ್ದಾಣದ ಪ್ಯಾಕೇಜ್ – 1 ಕಾಮಗಾರಿಗಳಿಗೆ ಮಾತ್ರ ಬಳಕೆ ಮಾಡತಕ್ಕದ್ದು.
- ಅನುದಾನ ಬಳಕೆ ಬಗ್ಗೆ ನಿಗಧಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

3. ಈ ಯೋಜನೆಗಾಗಿ 2021-22ನೇ ಸಾಲಿನ ಲೆಕ್ಕ ಶಿರ್ಷಿಕೆ 5465-01-190-1-05-132 – ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ - ಬಂಡವಾಳ ವೆಚ್ಚಗಳು ಅಡಿ ಒದಗಿಸಲಾಗಿರುವ ಅನುದಾನದಿಂದ ಭರಿಸತಕ್ಕದ್ದು.

4. ಈ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ., ಬೆಂಗಳೂರು ಇವರು ಪೇಯೀಸ್ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ-1 ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆ, ಬೆಂಗಳೂರು ಇಲ್ಲಿ ಪಡೆಯಲು ಅನುಮತಿಸಿದೆ.

4. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/605/ ಬಿಎಸ್‌ಆರ್ / 2021, ದಿನಾಂಕ:08/03/2022ರ ಮೂಲಕ ಒದಗಿಸಿರುವ ಹೆಚ್ಚುವರಿ ಅನುದಾನದ ಹಾಗೂ ಪತ್ರ ಸಂಖ್ಯೆ: ಆಇ 01 ಟಿಎಫ್‌ಪಿ 2021, ದಿನಾಂಕ: 31/12/2021ರಲ್ಲಿ ಇಲಾಖಾ ಅಪರ ಮುಖ್ಯ/ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Kai

**(ಎಸ್.ಎನ್. ಕಲಾವತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು
ಮತ್ತು ಒಳನಾಡು ಜಲಸಾರಿಗೆ ಇಲಾಖೆ,

**ಗೆ:**

1. ಪ್ರಧಾನ ಮಹಾಲೇಖಪಾಲರು (ಆಡಿಟ್-1,2,3A & E), ಪ್ರಧಾನ ಮಹಾಲೇಖಪಾಲರ ಕಚೇರಿ, ಎಎಡಿ ಸೆಕ್ಷನ್ ಕೆ.ಪಿ.ಎಸ್.ಸಿ.ಕಚೇರಿ ಎದುರು, ಬೆಂಗಳೂರು,
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
4. ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ, ವಿಜಯಪುರ.
5. ಮುಖ್ಯ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಧಾರವಾಡ.
6. ಆಯುಕ್ತರು, ಖಜಾನೆ ಇಲಾಖೆ, ಕೆ.ಪಿ.ಸಿ.ಎಲ್ ಬಿಲ್ಡಿಂಗ್ , ಅರಮನೆ ರಸ್ತೆ, ಬೆಂಗಳೂರು.
7. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು.
8. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ನಿರ್ದೇಶಕರು, PM & I ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜಭವನ, ಬೆಂಗಳೂರು.

**ಪ್ರತಿ:**

1. ಮಾನ್ಯ ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.

3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ನಿರ್ದೇಶಕರು, ಪಿಪಿಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಇವರು ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು.
5. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.